ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಬೆಳೆ ಸಮೀಕ್ಷೆ ಆಪ್‌ನಲ್ಲಿ ತಾಂತ್ರಿಕ ದೋಷಗಳಿರುವ ಬಗ್ಗೆ

ಶ್ರೀ ಹೆಚ್.ಎಂ.ರಮೇಶಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :-

219 (260) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳೆ ಸಮೀಕ್ಷೆ ಆಪ್‌ನಲ್ಲಿ ತಾಂತ್ರಿಕ ದೋಷಗಳು ಕಂಡುಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ರೈತರ ಹೆಸರಿನಲ್ಲಿ ರಸಗೊಬ್ಬರ ಖರೀದಿಯಲ್ಲಿ ಕೆಲವು ಖಾಸಗಿ ಸಂಸ್ಥೆಗಳು ನಕಲಿ ಬಿಲ್‌ಗಳನ್ನು ನೀಡಿ ಹಣ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ರಾಜ್ಯದ ಸ್ಥಳೀಯ ಭತ್ತದ ತಳಿಗಳ ಅಭಿವೃದ್ಧಿ ಮತ್ತು ಸಮಗ್ರ ಕೃಷಿ ಸಾವಯವ ವ್ಯವಸಾಯ ಮುಂತಾದ ಕಾರ್ಯಕ್ರಮಗಳಿಗೆ ಪ್ರಸಕ್ತ ಸಾಲಿನಲ್ಲಿ ಎಷ್ಟು ಹಣ ಮೀಸಲಿಡಲಾಗಿತ್ತು; ಖರ್ಚಾದ ಹಣ ಎಷ್ಟು;

(ಈ) ರಾಜ್ಯದ ಕೆಲವೆಡೆ ಈ ವರ್ಷ ಈರುಳ್ಳಿ ಬೆಳೆ ಸಂಪೂರ್ಣವಾಗಿ ನಾಶವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈರುಳ್ಳಿ ರೈತರ ಹಿತರಕ್ಷಣೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?